ಜಮೀನು ಮಂಜೂರಾತಿಗೆ ಸಲ್ಲಿಸಿದ ಅರ್ಜಿಗಳು

2134 (2893); ಶ್ರೀ ಹಾಲಾಡಿ ಶ್ರೀನಿವಾಸ ಶೆಟ್ಟಿ (ಕುಂದಾಪುರ)

ಅ) ಕಂದಾಯ ಇಲಾಖೆಯ ಜಮೀನಿನಲ್ಲಿ ಹಲವಾರು ವರ್ಷಗಳಿಂದ ಕೃಷಿ ಮಾಡಿಕೊಂಡಿದ್ದು, ನಮೂನೆ–50 ರಲ್ಲಿ ಮತ್ತು ಕುಮ್ಕಿ ಜಮೀನಿಗೆ ನಮೂನೆ–53 ರಲ್ಲಿ ಗ್ರಾಮೀಣ ಪ್ರದೇಶದ ರೈತರು ಅರ್ಜಿ ಸಲ್ಲಿಸುವಾಗ ಮಾಹಿತಿ ಕೊರತೆಯಿಂದಾಗಿ, ಅವರು ಹೊಂದಿರುವ ಜಮೀನಿಗೆ ಯಾವ ನಮೂನೆಯಲ್ಲಿ ಅರ್ಜಿ ಸಲ್ಲಿಸಬೇಕೆಂದು ಗೊತ್ತಿಲ್ಲದೆ ಅರ್ಜಿ ಸಲ್ಲಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಯಾವ ಜಮೀನಿಗೆ ಯಾವ ನಮೂನೆಯಲ್ಲಿ ಅರ್ಜಿ ಸಲ್ಲಿಸಬೇಕೆಂದು ಗೊತ್ತಿಲ್ಲದೇ ಸಲ್ಲಿಸಿದ ಅರ್ಜಿಗಳನ್ನು ತಿರಸ್ಕರಿಸದೇ, ಅಂತಹ ಅರ್ಜಿಗಳನ್ನು ರೈತರ ಹಿತದೃಷ್ಟಿಯಿಂದ ಪುರಸ್ಕರಿಸಲು ಕ್ರಮಕೈಗೊಳ್ಳಲಾಗುವುದೆ? (ವಿವರ ನೀಡುವುದು)

ಶ್ರೀ ವಿ. ಶ್ರೀನಿವಾಸ್ ಪ್ರಸಾದ್ (ಕಂದಾಯ ಸಚಿವರು)

ಅ) ನಿಗಧಿತ ನಮೂನೆಯಲ್ಲಿ ಅರ್ಜಿ ಸಲ್ಲಿಸದೇ ಬೇರೆ ನಮೂನೆಯಲ್ಲಿ ಅರ್ಜಿ ಸಲ್ಲಿಸಿರುವ ಪ್ರಕರಣಗಳು ಗಮನಕ್ಕೆ ಬಂದಿರುವುದಿಲ್ಲ. ನಮೂನೆ 50 ಮತ್ತು ನಮೂನೆ 53 ರಲ್ಲಿ ಅರ್ಜಿ ಸಲ್ಲಿಸಿರುವ ಪ್ರಕರಣಗಳನ್ನು ಪರಿಶೀಲಿಸಿ ನಿಯಮಾನುಸಾರ ಕ್ರಮ ಕೈಗೊಳ್ಳಲಾಗುತ್ತಿದೆ.

ಆ) ರೈತರು ಯಾವ ಜಮೀನಿಗೆ ಯಾವ ನಮೂನೆಯಲ್ಲಿ ಅರ್ಜಿ ಸಲ್ಲಿಸಬೇಕೆಂದು ಗೊತ್ತಿಲ್ಲದೇ ಸಲ್ಲಿಸಿದ ಅರ್ಜಿಗಳು ಇರುವುದಿಲ್ಲ.